ದಿಃ 13.09.2024 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಖ್ಯ ವಿಚಾರಣೆಃ ಶ್ರೀ ಕೆ.ಸಿ.ಸಿ., ವಕೀಲರಿಂದ ವಾದಿ ಪರವಾಗಿ

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.
2. ಗೋಣಿಬೀಡು ಗ್ರಾಮದ ಸರ್ವೆ ನಂಬರ್ 34/ಪಿ2 ರ 2 ಪಹಣಿ ಪತ್ರಗಳನ್ನು ಹಾಜರು ಮಾಡಿದ್ದು ನಿ.ಪಿ.1 ಮತ್ತು 2 ಎಂದು ಗುರುತಿಸಲಾಯಿತು, ಎಂ.ಆರ್.ನಂಬರ್ 31/2005-06 ನ್ನು ಹಾಜರು ಮಾಡಿದ್ದು ನಿ.ಪಿ.3 ಎಂದು ಗುರುತಿಸಲಾಯಿತು, ಎಂ.ಆರ್.ನಂಬರ್ 4/2007-08 ನ್ನು ಹಾಜರು ಮಾಡಿದ್ದು ನಿ.ಪಿ.4 ಎಂದು ಗುರುತಿಸಲಾಯಿತು, ಎಂ.ಆರ್.ನಂಬರ್ 3/2007-08 ನ್ನು ಹಾಜರು ಮಾಡಿದ್ದು ನಿ.ಪಿ.5 ಎಂದು ಗುರುತಿಸಲಾಯಿತು, ದಿಃ 06.06.2007 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.6 ಎಂದು ಗುರುತಿಸಲಾಯಿತು, ನಿ.ಪಿ.6 ದಾಖಲಾತಿಯನ್ನು ಪಡೆಯಲು ಹಣ ಪಾವತಿ ಮಾಡಿದ ರಸೀದಿಯನ್ನು ಹಾಜರು ಮಾಡಿದ್ದು ನಿ.ಪಿ.6(ಎ) ಎಂದು ಗುರುತಿಸಲಾಯಿತು, ದಿಃ 06.06.2007 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.7 ಎಂದು ಗುರುತಿಸಲಾಯಿತು, ನಿ.ಪಿ.7 ದಾಖಲಾತಿಯನ್ನು ಪಡೆಯಲು ಹಣ ಪಾವತಿ ಮಾಡಿದ ರಸೀದಿಯನ್ನು ಹಾಜರು ಮಾಡಿದ್ದು ನಿ.ಪಿ.7(ಎ) ಎಂದು ಗುರುತಿಸಲಾಯಿತು, ವಂಶ ವೃಕ್ಷವನ್ನು ಹಾಜರು ಮಾಡಿದ್ದು ನಿ.ಪಿ.8 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲಾಯಿತು)

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ದಿಃ 06.02.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಪಾಟೀ ಸವಾಲು ಶ್ರೀ ಎ.ಆರ್ ವಕೀಲರಿಂದ **1** ಮತ್ತು **3** ನೇ ಪ್ರತಿವಾದಿ ಪರವಾಗಿ

3. ಮಹಮೊದ್ದಿನ್ ಕಾನೂನು ಪ್ರಕಾರ ಗಂಡು ಮಕ್ಕಳಿಗೆ 3 ನೇ ಎರಡು ಭಾಗ ಮತ್ತು ಹೆಣ್ಣು ಮಕ್ಕಳಿಗೆ 3 ನೇ ಎರಡು ಭಾಗದ ಹಕ್ಕು ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಚಾರ ನನಗೆ ಗೊತ್ತಿದ್ದರು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 1 ಮತ್ತು 3 ನೇ ಪ್ರತಿವಾದಿಗಳಿಗೆ ದಾವ ಆಸ್ತಿಯಲ್ಲಿ 3 ನೇ ಎರಡು ಭಾಗದ ಹಕ್ಕು ಇರುತ್ತದೆ ಎಂದರೆ ಸರಿಯಲ್ಲ. ಸದರಿ ವಿಚಾರ ಗೊತ್ತಿದ್ದರು ಒಪ್ಪಿಕೊಂಡರೆ ದಾವೆಯಲ್ಲಿ ತೊಂದರೆಯಾಗುತ್ತದೆ ಎನ್ನುವ ಉದ್ದೇಶದಿಂದ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 1 ಮತ್ತು 3 ನೇ ಪ್ರತಿವಾದಿಗಳು ದಾವ ಆಸ್ತಿಯಲ್ಲಿ ಪಾಲು ಪಡೆಯಲು ಅರ್ಹರಾಗಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಎಲ್ಲಾ ವಿಚಾರಗಳು ಸತ್ಯಕ್ಕೆ ದೂರವಾಗಿವೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಶ್ರೀ ಪಿ.ಕೆ. ವಕೀಲರಿಂದ **2** ಮತ್ತು **6** ನೇ ಪ್ರತಿವಾದಿ ಪರವಾಗಿ

4. ಮಹಮೊದ್ದಿನ್ ಕಾನೂನು ಪ್ರಕಾರ ಗಂಡು ಮಕ್ಕಳಿಗೆ 3 ನೇ ಎರಡು ಭಾಗ ಮತ್ತು ಹೆಣ್ಣು ಮಕ್ಕಳಿಗೆ 3 ನೇ ಎರಡು ಭಾಗದ ಹಕ್ಕು ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಚಾರ ನನಗೆ ಗೊತ್ತಿದ್ದರು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ಮತ್ತು 6 ನೇ ಪ್ರತಿವಾದಿಗಳಿಗೆ ದಾವ ಆಸ್ತಿಯಲ್ಲಿ 3 ನೇ ಎರಡು ಭಾಗದ ಹಕ್ಕು ಇರುತ್ತದೆ ಎಂದರೆ ಸರಿಯಲ್ಲ. ಸದರಿ ವಿಚಾರ ಗೊತ್ತಿದ್ದರು ಒಪ್ಪಿಕೊಂಡರೆ ದಾವೆಯಲ್ಲಿ ತೊಂದರೆಯಾಗುತ್ತದೆ ಎನ್ನುವ ಉದ್ದೇಶದಿಂದ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ಮತ್ತು 6 ನೇ ಪ್ರತಿವಾದಿಗಳು ದಾವ ಆಸ್ತಿಯಲ್ಲಿ ಪಾಲು

ಪಡೆಯಲು ಅರ್ಹರಾಗಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಎಲ್ಲಾ ವಿಚಾರಗಳು ಸತ್ಯಕ್ಕೆ ದೂರವಾಗಿವೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಶ್ರೀ ಎಂ.ವಿ.ಜೆ ವಕೀಲರಿಂದ **7** ಮತ್ತು **8** ನೇ ಪ್ರತಿವಾದಿ ಪರವಾಗಿ</u>

5. ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿರುತ್ತಾರೆ. ಸಮಯಾವಕಾಶ ನೀಡಲಾಗಿದೆ.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ